# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ದಕ್ಷಿಣ ವಲಯ

**ಬೈರಸಂದ್ರ , ವಾರ್ಡ ಸಂಖ್ಯೆ: 169**

**ದಿನಾಂಕ:21.03.2022 ರಂದು ವಾರ್ಡ ಸಂಖ್ಯೆ 169 ಬೈರಸಂದ್ರ ವಾರ್ಡನಲ್ಲಿ ನಡೆದ ವಾರ್ಡ ಸಮಿತಿ ಸಭೆ:**

**–: ಸಮಿತಿ ಸಭೆಯ ನಡವಳಿಗಳು :–**

ವಾರ್ಡ ಸಮಿತಿ ಸಭೆಯಲ್ಲಿ ಹಾಜರಿದ್ದ ಅಧಿಕಾರಿಗಳು ಮತ್ತು ವಾರ್ಡ ಸಮಿತಿ ಸದಸ್ಯರು:–

| ಕ್ರಮ ಸಂಖ್ಯೆ | ಹೆಸರು | ಹುದ್ದೆ |
|---|---|---|
| 01 | ಶ್ರೀ ವಾಲೂ ರಾಥೋಡ್ | ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳು |
| 02 | ಶ್ರೀ ಚಂದ್ರಶೇಖರ್ ವಿ | ಕಾರ್ಯಾದರ್ಶಿ ಮತ್ತು ಸಂಚಾಲಕರು |
| 03 | ಶ್ರೀ ನರೇಂದ್ರ ಬಾಬು | ಅರಣ್ಯ ಇಲಾಖೆ (ದಕ್ಷಿಣ) , ಬಿ.ಬಿ.ಎಂ.ಪಿ |
| 04 | ಶ್ರೀ ಸುನೀಲ್ ಕುಮಾರ್ ವಿ | ಸಹಾಯಕ ಅಭಿಯಂತರರು, BWSSB |
| 05 | ಶ್ರೀ ಮಂಜುನಾಥ್ | ಕೆಲಸ ಪರಿವೀಕ್ಷಕರು, BWSSB |
| 06 | ಕುಮಾರಿ ಪೂನಂ | ಹಿರಿಯ ಆರೋಗ್ಯ ನಿರೀಕ್ಷಕರು, ಬಿ.ಬಿ.ಎಂ.ಪಿ |
| 07 | ಶ್ರೀ ರಮೇಶ್ ವಿ ಬಿ | ಕಿರಿಯ ಆರೋಗ್ಯ ನಿರೀಕ್ಷಕರು, ಬಿ.ಬಿ.ಎಂ.ಪಿ |
| 08 | ಶ್ರೀಮತಿ ಪ್ರೀತಿ | ತಿಲಕ್ ನಗರ ಮಹಿಳಾ ಸಂಘದ ಅಧ್ಯಕ್ಷರು |
| 09 | ಶ್ರೀಮತಿ ಲಕ್ಷ್ಮೀ | ಬೈರಸಂದ್ರ ಮಹಿಳಾ ಸಂಘದ ಅಧ್ಯಕ್ಷರು |
| 10 | ಶ್ರೀ ಮೋಹನ್ ರಾವ್. ಇ | ಎಲ್.ಐ.ಸಿ ಕಾಲೋನಿ ನಿವಾಸಿಗಳ ಸಂಘ |
| 11 | ಶ್ರೀ ಶ್ರೀನಿವಾಸನ್ | ಎಲ್.ಐ.ಸಿ ಕಾಲೋನಿ ನಿವಾಸಿಗಳ ಸಂಘ |
| 12 | ಶ್ರೀ ಮಂಜುನಾಥ್ ಜಿ ಎನ್ | ಎಲ್.ಐ.ಸಿ ಕಾಲೋನಿ ನಿವಾಸಿಗಳ ಸಂಘ |
| 13 | ಶ್ರೀ ಪ್ರಕಾಶ್ ಎಂ ಆರ್ | ಎಲ್.ಐ.ಸಿ ಕಾಲೋನಿ ನಿವಾಸಿಗಳ ಸಂಘ |
| 14 | ಶ್ರೀ ಪರಮೇಶ್ವರನ್ ಟಿ ಕೆ | ಎಲ್.ಐ.ಸಿ ಕಾಲೋನಿ ನಿವಾಸಿಗಳ ಸಂಘದ ಕಾರ್ಯಾದರ್ಶಿ |
| 15 | ಶ್ರೀ ಬಾಬು ರಾವ್ | ಎಲ್.ಐ.ಸಿ ಕಾಲೋನಿ ನಿವಾಸಿಗಳ ಸಂಘದ ಅಧ್ಯಕ್ಷರು |

ವಾರ್ಡ ಸಮಿತಿ ಅಧ್ಯಕ್ಷರು ಸಭೆಗೆ ಹಾಜರಿದ್ದ ಎಲ್ಲಾ ಸದಸ್ಯರು ಮತ್ತು ಅಧಿಕಾರಿ ವರ್ಗದವರಿಗೆ ಸ್ವಾಗತ ಕೋರುತ್ತಾ , ಸಭೆಯನ್ನು ಪ್ರಾರಂಭಿಸಿದರು.

1. ಮಾನ್ಯ ನೋಡಲ್ ಅಧಿಕಾರಿಗಳು ಮಾತನಾಡುತ್ತಾ ಹಿಂದಿನ ಸಭೆಯಲ್ಲಿ ತಿಳಿಸಿದ ಸಮಸ್ಯೆಗಳ ಬಗ್ಗೆ ಅಧಿಕಾರಿಗಳು ಮತ್ತು ವಾರ್ಡ ಸಮಿತಿ ಸದಸ್ಯರಿಂದ ಮಾಹಿತಿ ಪಡೆದುಕೊಂಡರು.
2. ವಾರ್ಡ ಸಂಖ್ಯೆ 169 ರಲ್ಲಿರುವ ಅನೇಕ ಪಾರ್ಕನಲ್ಲಿ ಸೊಳ್ಳೆಗಳು ತುಂಬಾ ಹೆಚ್ಚಾಗಿದ್ದು , ಪಾರ್ಕಗಳಲ್ಲಿನ ಸೊಳ್ಳೆಗಳನ್ನು ನಿಯಂತ್ರಿಸಲು ಸೊಳ್ಳೆ ಔಷದಿಯನ್ನು ಸಿಂಪಡಿಸಲು ಸಭೆಯಲ್ಲಿ ಕೋರಿದರು. **(ಕ್ರಮ: ಆರೋಗ್ಯಾಧಿಕಾರಿಗಳು, ಬಿ.ಬಿ.ಎಂ.ಪಿ, ಜಯನಗರ)**

Scanned with CamScanner

3. ವಾರ್ಡ ಸಂಖ್ಯೆ 169 ನಲ್ಲಿರುವ ಬೃಹತ್ ನೀರುಗಾಲುವೆಯಲ್ಲಿ ಹೊಳು ತುಂಬಿಕೊಂಡಿದ್ದು , ಕೊಡಲೇ ಹೂಳುನ್ನು ತೆಗೆಯಲು ಮತ್ತು ಬೃಹತ್ ನೀರುಗಾಲುವೆಯ ಪಕ್ಕದಲ್ಲಿ Kerb ಗಳನ್ನು ಅಳವಡಿಸಲು ಸಭೆಯಲ್ಲಿ ಕೋರಿದರು. **(ಕ್ರಮ: ಸ.ಕಾ.ನಿ.ಅ, ಬೃಹತ್ ನೀರುಗಾಲುವೆ, ಬಿ.ಬಿ.ಎಂ.ಪಿ ಜಯನಗರ)**
4. LIC ಕಾಲೋನಿನಲ್ಲಿರುವ ಅನೇಕ ಮ್ಯಾನ್‌ಹೋಲ್ (Manhole) ಗಳಲ್ಲಿ ಹೊಳು ತುಂಬಿಕೊಂಡಿದ್ದು, ಮ್ಯಾನ್‌ಹೋಲ್‌ಗಳಲ್ಲಿರುವ ಹೂಳುನ್ನು ತೆಗೆಯಲು ಸಭೆಯಲ್ಲಿ ಕೋರಿದರು. **(ಕ್ರಮ: ಸ.ಕಾ.ನಿ.ಅ, BWSSB, ಜಯನಗರ)**
5. 10ನೇ ಅಡ್ಡರಸ್ತೆ ಬೈರಸಂದ್ರರಲ್ಲಿನ ರಸ್ತೆಯ ಮಳೆನೀರು ರಸ್ತೆಯಿಂದ ಚರಂಡಿಗೆ ಸರಗವಾಗಿ ಹರಿಯಲು Shoulder Drian ಗಳನ್ನು ನಿರ್ಮಿಸಲು ಸಭೆಯಲ್ಲಿ ಕೋರಿದರು. **(ಕ್ರಮ: ಕಿ.ಅ, ವಾರ್ಡ 169 ಬೈರಸಂದ್ರ , ಬಿ.ಬಿ.ಎಂ.ಪಿ)**
6. 10ನೇ ಅಡ್ಡರಸ್ತೆಯಲ್ಲಿರುವ ಗಣೇಶ ದೇವಸ್ಥಾನ ಹಿಂದಗಡೆಯಲ್ಲಿರುವ ಖಾಲಿ ಜಾಗದಲ್ಲಿ ಕಸ ಸಂಗ್ರಹಣೆ ವಾಹನಗಳನ್ನು ನಿಲ್ಲಿಸಲು ಅವಕಾಶವಿದ್ದು ಇದರ ಬಗ್ಗೆ ಕ್ರಮವಹಿಸಲು ಸಭೆಯಲ್ಲಿ ಕೋರಿದರು. **(ಕ್ರಮ: ಆರೋಗ್ಯಾಧಿಕಾರಿಗಳು, ಬಿ.ಬಿ.ಎಂ.ಪಿ ಜಯನಗರ)**
7. LIC ಕಾಲೋನಿನಲ್ಲಿರುವ ಪಾರ್ಕ್‌ನ ನಿರ್ವಹಣೆ ಕಾರ್ಯ ಸರಿಯಾದ ಕ್ರಮದಲ್ಲಿ ನಿರ್ವಹಿಸುತ್ತಿರುವುದಿಲ್ಲ. ಇದರ ಬಗ್ಗೆ ಕ್ರಮವಹಿಸಲು ಸಭೆಯಲ್ಲಿ ಕೋರಿದರು. **(ಕ್ರಮ: ಸ.ಕಾ.ನಿ.ಅ, ಯೋಜನೆ (ದಕ್ಷಿಣ) ಬಿ.ಬಿ.ಎಂ.ಪಿ ಜಯನಗರ)**
8. ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ (SBI) ಬೈರಸಂದ್ರದ ಎದುರುಗಡೆ ಮತ್ತು LIC ಕಾಲೋನಿನಲ್ಲಿರುವ 1ನೇ ಮುಖ್ಯರಸ್ತೆ 1ನೇ ಅಡ್ಡರಸ್ತೆ ಜಂಕ್ಷನ್ ನಲ್ಲಿರುವ ಮರದ ಉದ್ದವಾಗಿರುವ ಕೊಂಬೆಗಳನ್ನು ಕತ್ತರಿಸುವಂತೆ ಸಭೆಯಲ್ಲಿ ಕೋರಿದರು. **(ಕ್ರಮ: ಅರಣ್ಯ ಇಲಾಖೆ (ದಕ್ಷಿಣ) ಬಿ.ಬಿ.ಎಂ.ಪಿ ಜಯನಗರ)**
9. ಕೆನರಾ ಬ್ಯಾಂಕ್ ಕಾಲೋನಿನಲ್ಲಿರುವ ಮರದಲ್ಲಿನ ಒಣಗಿದ ಕೊಂಬೆಗಳು ಬೀಳುವ ಸ್ಥಿತಿಯಲ್ಲಿದ್ದು, ಅಂತಹ ಕೊಂಬೆಗಳನ್ನು ಕತ್ತರಿಸಿ ತೆಗೆಯುವಂತೆ ಸಭೆಯಲ್ಲಿ ಕೋರಿದರು. **(ಕ್ರಮ: ಅರಣ್ಯ ಇಲಾಖೆ (ದಕ್ಷಿಣ) ಬಿ.ಬಿ.ಎಂ.ಪಿ ಜಯನಗರ)**
10. ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ (SBI) ಬೈರಸಂದ್ರದ ರಸ್ತೆಯಲ್ಲಿ ವಾಹನಗಳು ವೇಗವಾಗಿ ಚಲಿಸುತ್ತಿದ್ದು ಅಪಘಾತ ಸಂಭವಿಸುವ ಸಾಧ್ಯತೆಯಿದ್ದು, ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾನ ಎದುರುಗಡೆ Hump ಅನ್ನು ನಿರ್ಮಿಸಲು ಸಭೆಯಲ್ಲಿ ಕೋರಿದರು. **(ಕ್ರಮ: Traffic Engineering Cell BBMP)**
11. LIC ಕಾಲೋನಿಯ 5ನೇ ಅಡ್ಡರಸ್ತೆಯಲ್ಲಿರುವ ವಿದ್ಯುತ್ ಕಂಬದಲ್ಲಿ ವಿದ್ಯುತ್ ಕಿಡಿ(Spark) ಬರುತ್ತಿದ್ದು ತಕ್ಷಣವೇ ಸರಿಪಡಿಸುವಂತೆ ಸಭೆಯಲ್ಲಿ ಕೋರಿದರು. **(ಕ್ರಮ: ಸ.ಕಾ.ನಿ.ಅ, BESCOM, ಜಯನಗರ)**

**ನಿರ್ಣಯ:** ಈ ವಿಷಯಕ್ಕೆ ಸಮಿತಿಯು ಒಪ್ಪಿಗೆ ತಿಳಿಸಿರುತ್ತಾರೆ. ಕೊನೆಯದಾಗಿ ಸದಸ್ಯ ಕಾರ್ಯದರ್ಶಿಗಳು ಸಭೆಗೆ ಹಾಜರಾದ ಎಲ್ಲಾ ಸದಸ್ಯರು ಮತ್ತು ಅಧಿಕಾರಿಗಳಿಗೆ ವಂದನೆಯನ್ನು ತಿಳಿಸುತ್ತಾ, ಇಂದಿನ ಸಭೆಯಲ್ಲಿ ಚರ್ಚಿಸಿದ ವಿಷಯಗಳ ಬಗ್ಗೆ ಕೈಗೊಂಡಿರುವ ಕ್ರಮಗಳನ್ನು ಮುಂದಿನ ಸಭೆಯಲ್ಲಿ ಪೂರ್ಣ ಮಾಹಿತಿಯನ್ನು ಒದಗಿಸಬೇಕೆಂದು ಕಾರ್ಯದರ್ಶಿ ಮತ್ತು ಇಲಾಖಾ ಅಧಿಕಾರಿಗಳಿಗೆ ತಿಳಿಸಿ, ಸಭೆಯನ್ನು ಮುಕ್ತಾಯಗೊಳಿಸಲಾಯಿತು.

V. Sooe...

(ಶ್ರೀ ಚಂದ್ರಶೇಖರ್. ವಿ)
ಕಾರ್ಯದರ್ಶಿ ಮತ್ತು ಸಂಚಾಲಕರು
ವಾರ್ಡ್ ಸಮಿತಿ, ವಾರ್ಡ–169, ಬೈರಸಂದ್ರ

Scanned with CamScanner